# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್–19 ಕರ್ತವ್ಯನಿರತ ರಾಜ್ಯದ ಎಲ್ಲಾ ಇಲಾಖೆಗಳ ಎಲ್ಲಾ ವೃಂದದ ಸರ್ಕಾರಿ ನೌಕರರು ಸೋಂಕಿನಿಂದ ನಿಧನರಾದ ಸಂದರ್ಭದಲ್ಲಿ ವಿಮಾ–ಪರಿಹಾರ ಮೊತ್ತವನ್ನು ಮಂಜೂರು ಮಾಡುವ ಬಗ್ಗೆ

ಓದಲಾಗಿದೆ: ಪತ್ರ ಸಂಖ್ಯೆ: ಇ–ಸಿಎಂ/1556227/2020,ದಿನಾಂಕ:30.07.2020

ಪ್ರಸ್ತಾವನೆ:

ರಾಜ್ಯಾಧ್ಯಕ್ಷರು, ಕರ್ನಾಟಕ ಸರ್ಕಾರಿ ನೌಕರರ ಸಂಘ, ಇವರು ಮಾನ್ಯ ಮುಖ್ಯ ಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಿ ಇತ್ತೀಚೆಗೆ ರಾಜ್ಯದಲ್ಲಿ ಕೋವಿಡ್–19 ಸೋಂಕು ವ್ಯಾಪಕವಾಗಿ ಉಲ್ಬಣಗೊಳ್ಳುತ್ತಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ಸೋಂಕು ಹರಡುವಿಕೆ ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳ ಎಲ್ಲಾ ವೃಂದದ ಸರ್ಕಾರಿ ನೌಕರರನ್ನು ಕೋವಿಡ್ –19 ಸೋಂಕು ನಿಯಂತ್ರಣ ಕಾರ್ಯಕ್ಕೆ ನಿಯೋಜಿಸಿದ್ದು, ಕೋವಿಡ್–19 ಕರ್ತವ್ಯ ನಿರತ ರಾಜ್ಯ ಸರ್ಕಾರಿ ನೌಕರರು ಸೋಂಕಿಗೆ ಸಿಲುಕಿ ಅಕಾಲಿಕ ಮರಣಕ್ಕೆ ತುತ್ತಾಗಿರುತ್ತಾರೆ. ಈ ಹಿನ್ನಲೆಯಲ್ಲಿ ಕೋವಿಡ್–19 ಕರ್ತವ್ಯ ನಿರತ ರಾಜ್ಯ ಸರ್ಕಾರಿ ನೌಕರರು ಮತ್ತು ಕುಟುಂಬವರ್ಗಕ್ಕೆ ಮಾನಸಿಕ ಹಾಗೂ ಆತ್ಮಸ್ಥೈರ್ಯ ನೀಡುವ ಸಲುವಾಗಿ ವಿಮಾ–ಪರಿಹಾರ ಮೊತ್ತವನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.ಮೇಲಿನ ಮನವಿಯನ್ನು ಪರಿಗಣಿಸಿ ಮಾನ್ಯ ಮುಖ್ಯಮಂತ್ರಿಗಳು ನೀಡಿದ ನಿರ್ದೇಶನದಂತೆ ಈ ಕೆಳಗಿನಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 190 ವೆಚ್ಚ 11/2020, ದಿನಾಂಕ: 07.08.2020

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳಂತೆ **"ಕೋವಿಡ್–19 ಕೆಲಸಕ್ಕೆ ನಿಯೋಜನೆಗೊಳ್ಳುವ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳ ಎಲ್ಲಾ ವೃಂದದ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದವರಿಗೆ ಮನೋಸ್ಥೈರ್ಯ ತುಂಬಲು, ಸರ್ಕಾರದ ವತಿಯಿಂದ ಈ ಕಾರ್ಯಚರಣೆಯಲ್ಲಿ ಪಾಲ್ಗೊಂಡ ಸರ್ಕಾರಿ ನೌಕರರು ಕೋವಿಡ್–19 ರೋಗದಿಂದ ಮೃತರಾದಲ್ಲಿ ರೂ.30.00 ಲಕ್ಷ ಪರಿಹಾರ ಒದಗಿಸಲಾಗುವುದು ಮತ್ತು ಸರ್ಕಾರಿ ನೌಕರರು ಕೋವಿಡ್–19 ಕೆಲಸದಲ್ಲಿ ಪಾಲ್ಗೊಂಡಿರುವ ಸಮಯದಲ್ಲಿ ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ಒಳಗಾದಲ್ಲಿ ಅವರ ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಸರ್ಕಾರದಿಂದ ಭರಿಸಲಾಗುವುದು"** ಎಂದು ಮಂಜೂರಾತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಪುರುಷೋತ್ತಮ್ ಸಿಂಗ್ ಬಿ.ಹೆಚ್)

ವಿಶೇಷಾಧಿಕಾರಿ (ಜಿ.ಪಂ) ಮತ್ತು ಪದನಿಮಿತ್ತ

ಸರ್ಕಾರದ ಉಪ ಕಾರ್ಯದರ್ಶಿ

ಆರ್ಥಿಕ ಇಲಾಖೆ

ಇವರಿಗೆ:

1. ಮಹಾಲೇಖಪಾಲರು ,ಕರ್ನಾಟಕ , ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ ,ಬೆಂಗಳೂರು
3. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿಗಳು